ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 : ಮೇ 18, 2020**

# ಪತ್ರಿಕಾ ಪ್ರಕಟಣೆ

## ವಸತಿ ಸಚಿವರ ಪ್ರವಾಸ

ಬೆಂಗಳೂರು, ಮೇ 18 ( ಕರ್ನಾಟಕ ವಾರ್ತೆ ) :

ವಸತಿ ಸಚಿವ ವಿ. ಸೋಮಣ್ಣ ಅವರು ಮೇ 22 ರಂದು ಕೊಡಗು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಛಾಯಾಚಿತ್ರ ಶೀರ್ಷಿಕೆ )

1) ಮುಖ್ಯ ಮಂತ್ರಿಗಳ ಕೋವಿಡ್ –19 ಪ್ರಕೃತಿ ವಿಕೋಪ ಪರಿಹಾರ ನಿಧಿಗೆ ಇಂದು ಬೆಂಗಳೂರು ವಿಶ್ವವಿದ್ಯಾಲಯದ ವತಿಯಿಂದ 25 ಲಕ್ಷ ರೂ.ಗಳ ದೇಣಿಗೆಯ ಚೆಕ್‌ನ್ನು ಕುಲಪತಿ ವೇಣುಗೋಪಾಲ್ ಅವರು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ ಹಸ್ತಾಂತರ ಮಾಡಿದರು. ವಿಶ್ವವಿದ್ಯಾಲಯದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

2) ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಅಧ್ಯಕ್ಷತೆಯಲ್ಲಿ ಇಂದು ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ಕೋವಿಡ್ 19 ನಿಯಂತ್ರಣ ಹಾಗೂ ಆರ್ಥಿಕ ಚಟುವಟಿಕೆಗಳನ್ನು ಪ್ರಾರಂಭಿಸುವ ಕುರಿತು ಸಭೆ ಜರುಗಿತು.

ಉಪಮುಖ್ಯಮಂತ್ರಿಗಳಾದ ಡಾ: ಸಿ. ಎನ್. ಅಶ್ವತ್ಥ್‌ನಾರಾಯಣ್, ಗೋವಿಂದ ಕಾರಜೋಳ, ಲಕ್ಷಣ್ ಸವದಿ, ಗೃಹ ಸಚಿವ ಬಸವರಾಜ ಬೊಮ್ಮಾಯಿ, ವೈದ್ಯಕೀಯ ಶಿಕ್ಷಣ ಸಚಿವ ಡಾ: ಕೆ. ಸುಧಾಕರ್, ಕಂದಾಯ

ಸಚಿವ ಆರ್. ಅಶೋಕ, ಮುಖ್ಯ  ಕಾರ್ಯದರ್ಶಿ ಟಿ. ಎಂ. ವಿಜಯಭಾಸ್ಕರ್ ಸೇರಿದಂತೆ ಹಿರಿಯ ಸಚಿವರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

ಛಾಯಾಚಿತ್ರ ಶೀರ್ಷಿಕೆ )

## CySecK –Karnataka’s Centre of Excellence in Cyber Security – launches start-up programme titled H.A.C.K.

Bengaluru, May 18 (Karnataka Information): CySecK – the Karnataka state’s CoE (Centre of Excellence) in Cyber Security – has launched an accelerator programme for cyber security start-ups. This accelerator is branded as H.A.C.K. – which is a recursive acronym and expands as **H**ACK is an **A**ccelerator for **C**yber security in **K**arnataka.H.A.C.K. is Karnataka’s first cyber security-specific accelerator.

The programme was inaugurated on 16-May-2020by Dr. E. V. Ramana Reddy, Additional Chief Secretary in charge of the Department of IT, BTand S&T. In view of the current lockdown, the programme inauguration was done online with participants joining from across the globe. The programme has 21 start-ups on board across three cohorts: 10x cohort, 0-1 cohort and virtual cohort.

Cyber security start-ups are typically deep-tech start-ups innovating in highly specialised technical areas. Such start-ups from India have special challenges in addition tothe ones that start-ups generally face, primarily due to lack of market maturity and availability of skilled talent.

This has resulted in India relyingprimarily on global companies for cyber security products. It is important for the nation to achieve higher self-reliance in the critical domain of cyber security. This programme will support mature Indian start-ups to accelerate their growth through government and market connections, and nascent start-ups to mature through an innovative incubation eco-system and marquee mentorship. In this way, the programme will also support the Atma-Nirbhar Bharat Abhiyan.

The applications from the start-ups were evaluated by an independent panel that had representation from the government, academia, industry practitioners and investor community.

**About CySecK**

CySecK is the Karnataka state government's CoE in Cyber Security, housed in the IISc (Indian Institute of Science) campus, with IISc as the anchor institute and KSCST (Karnataka State Council for Science and Technology) as the implementation agency. CySecK was setup by KITS (Karnataka Innovation and Technology Society) of the Department of IT, BTand S&T.

The key objectives of the CoE are to promote a cyber-safe and conducive environment for industry collaboration, address skills gap, build awareness and foster innovation in the emerging technology field of cyber security. The CoE will also facilitate standardization and best practices for information security across industry domains, research and development, and technical training programmes in cyber security.

**ಜೂ. 18ಕ್ಕೆ ಪಿಯು ಇಂಗ್ಲಿಷ್ ಪರೀಕ್ಷೆ ಹಾಗೂ 25ರಿಂದ ಎಸ್.ಎಸ್.ಎಲ್.ಸಿ**

**– ಸಚಿವ ಸುರೇಶ್‌ಕುಮಾರ್**

**ಬೆಂಗಳೂರು, ಮೇ 18 ( ಕರ್ನಾಟಕ ವಾರ್ತೆ )**

ರಾಜ್ಯದ ವಿದ್ಯಾರ್ಥಿಗಳು ಮತ್ತು ಪೋಷಕರು ಬಹುದಿನಗಳಿಂದ ನಿರೀಕ್ಷಿಸುತ್ತಿದ್ದಎಸ್.ಎಸ್.ಎಲ್.ಸಿ. ಪರೀಕ್ಷೆ ಮತ್ತು ಬಾಕಿ ಉಳಿದ ಪಿಯುಸಿ ಇಂಗ್ಲಿಷ್ ಪರೀಕ್ಷೆಗೆ ದಿನಾಂಕಗಳನ್ನು ಪ್ರಕಟಿಸಲಾಗಿದ್ದು, ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು ಸೇರಿದಂತೆ ಸಂಪೂರ್ಣಆರೋಗ್ಯಕರ ವಾತಾವರಣದಲ್ಲಿ ಪರೀಕ್ಷೆಗಳು ನಡೆಯಲಿವೆ.

ಎಸ್ಸೆಸ್ಸೆಲ್ಸಿ ಪರೀಕ್ಷೆಗಳು ಜೂನ್ 25ರಿಂದ ಜುಲೈ 4ರವರೆಗೆ ನಡೆಯಲಿದ್ದು, ಇಂಗ್ಲೀಷ್, ಗಣಿತ, ವಿಜ್ಞಾನ ಹಾಗೂ ಸಮಾಜ ವಿಜ್ಞಾನ ವಿಷಯಗಳಿಗೆ ಸಂಬಂಧಿಸಿದಂತೆ ಪ್ರತಿ ವಿಷಯಕ್ಕೆ ಒಂದು ದಿನದ ಅಂತರವನ್ನು ನೀಡಿ 10 ದಿನಗಳ ಒಟ್ಟು ಅವಧಿಯಲ್ಲಿಪರೀಕ್ಷೆ ಮುಗಿಯಲಿವೆ ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್‌ಕುಮಾರ್ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಬಾಕಿ ಉಳಿದಿದ್ದ ಪಿ.ಯು.ಸಿ. ಇಂಗ್ಲೀಷ್ ಪರೀಕ್ಷೆ ಜೂನ್18 ರಂದು ನಡೆಯಲಿದೆ.

ಈ ಬಾರಿ 8,48,196 ವಿದ್ಯಾರ್ಥಿಗಳು ಎಸ್ಸೆಸ್ಸೆಲ್ಸಿ ಪರೀಕ್ಷೆ ತೆಗೆದುಕೊಳ್ಳಲಿದ್ದು,ಅದಕ್ಕಾಗಿ 2879 ಪರೀಕ್ಷಾ ಕೇಂದ್ರಗಳಲ್ಲಿ ಸುಮಾರು 43,720 ಕೊಠಡಿಗಳನ್ನು ಸೃಜಿಸಲಾಗಿದೆ.ಆರೋಗ್ಯ ಇಲಾಖೆಯ ಸಲಹೆಯಂತೆ ವಿದ್ಯಾರ್ಥಿಗಳ ನಡುವೆ ಅಗತ್ಯ ದೈಹಿಕ ಅಂತರವನ್ನು ಕಾಯ್ದುಕೊಳ್ಳುವ ರೀತಿಯಲ್ಲಿ ಆಸನ ವ್ಯವಸ್ಥೆಯನ್ನು ಮಾಡಲಾಗುವುದು.ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಗಳಿಗೆ ಬೆಳಿಗ್ಗೆ 9.30 ಕ್ಕೆ ಹಾಜರಾಗಿ ಥರ್ಮಲ್ ಸ್ಕ್ಯಾನರ್ ಮೂಲಕ ವೈದ್ಯಕೀಯ ತಪಾಸಣೆಗೆ ಒಳಪಟ್ಟ ನಂತರವೇ 10.30ಕ್ಕೆ ಪ್ರಾರಂಭವಾಗುವ ಪರೀಕ್ಷೆಗೆ ಹಾಜರಾಗಲಿದ್ದು, ಇದಕ್ಕಾಗಿ ಆರೋಗ್ಯ ಇಲಾಖೆ ಎಲ್ಲರೀತಿಯ ನೆರವು ನೀಡಲಿದೆ ಎಂದು ಸಚಿವರು ವಿವರಿಸಿದರು.

ಪ್ರತಿ ವಿದ್ಯಾರ್ಥಿಯು ಮಾಸ್ಕ್ ಮತ್ತು ಸ್ಯಾನಿಟೈಜರ್ ಬಳಸಿ ಪರೀಕ್ಷೆ ಹಾಜರಾಗುವ ವ್ಯವಸ್ಥೆ ಮಾಡಲಾಗಿದ್ದು, ಮಾಸ್ಕ್‌ಗಳನ್ನು ಇಲಾಖೆಯ ವತಿಯಿಂದಲೇ ಸ್ಕೌಟ್ಸ್ ಮತ್ತು ಗೈಡ್ಸ್ ಹಾಗೂ ಇತರೆ ಸಂಘ ಸಂಸ್ಥೆಗಳ ಮೂಲಕ ಉಚಿತವಾಗಿ ಪೂರೈಸಲಾಗುವುದು. ಸ್ಯಾನಿಟೈಜರ್ ವಿತರಣೆಗೆ ಸ್ಕೌಟ್ಸ್ ಮತ್ತು ಗೈಡ್ಸ್ ಸ್ವಯಂ ಸೇವಕರನ್ನು ಬಳಸಿಕೊಳ್ಳಲಾಗುವುದು. ಸ್ಯಾನಿಟೈಜರ್‌ಗಳನ್ನು ವಿವಿಧ ಸ್ವಯಂ ಸೇವಾ ಸಂಸ್ಥೆಗಳ ವತಿಯಿಂದ ಉಚಿತವಾಗಿ ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಪೂರೈಸಲಾಗುವುದು ಎಂದು ಸುರೇಶ್‌ಕುಮಾರ್ ತಿಳಿಸಿದರು.

ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಆರೋಗ್ಯಇಲಾಖೆಯ ಸಿಬ್ಬಂದಿಯವರು ವಿದ್ಯಾರ್ಥಿಗಳ ಆರೋಗ್ಯದ ಬಗ್ಗೆ ಕಾಳಜಿ ವಹಿಸಲು ಅನುಕೂಲವಾಗುವಂತೆ ಹಾಜರಿರಲು ವ್ಯವಸ್ಥೆ ಮಾಡಲಾಗಿದೆ. ಪರೀಕ್ಷಾ ಕೇಂದ್ರಕ್ಕೆ ಆಗಮಿಸುವ ವಿದ್ಯಾರ್ಥಿಗಳಲ್ಲಿ ಆರೋಗ್ಯದ ಸಮಸ್ಯೆಗಳು ಇದ್ದಲ್ಲಿ ಅಂತಹವರನ್ನು ಪ್ರತ್ಯೇಕ ಕೊಠಡಿಗಳಲ್ಲಿ ಪರೀಕ್ಷೆ ಬರೆಸುವವ್ಯವಸ್ಥೆ ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಒಂದೆರೆಡು ದಿನಗಳ ಮುಂಚೆ ಎಲ್ಲಾ ಸ್ವಚ್ಛತಾ ಕ್ರಮಗಳ ಮೂಲಕ ಸ್ಯಾನಿಟೈಜ್ ಮಾಡಲಾಗುವುದುಎಂದು ಸಚಿವರು ತಿಳಿಸಿದರು.

ಬಹುತೇಕ ಜಿಲ್ಲೆಗಳಲ್ಲಿ ಸರ್ಕಾರದ ಸಮಾಜ ಕಲ್ಯಾಣ ಇಲಾಖೆಯ ಮತ್ತುಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳು, ವಸತಿ ಶಾಲೆಗಳು ಹಾಗೂ ಕೆಲವೊಂದು ಜಿಲ್ಲೆಗಳಲ್ಲಿ ಖಾಸಗಿ ಸಂಸ್ಥೆಗಳ ಹಾಸ್ಟೆಲ್‌ಗಳನ್ನು ಕ್ವಾರಂಟೈನ್ ಕೇಂದ್ರಗಳಾಗಿ ಉಪಯೋಗಿಸಿಕೊಳ್ಳುತ್ತಿರುವುದರಿಂದ ಈ ಹಾಸ್ಟೆಲ್ ವಾಸಿಗಳಾಗಿದ್ದ ಮಕ್ಕಳು ತಂತಮ್ಮ ಗ್ರಾಮಗಳಿಗೆ ಹೋಗಿರುವ ಹಿನ್ನೆಲೆಯಲ್ಲಿ ಈಗಾಗಲೇ ಆವರು ನೊಂದಾಯಿಸಿರುವ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆಯಲು ಸಾಧ್ಯವಿಲ್ಲವಾದ್ದರಿಂದಅಂತಹ ವಿದ್ಯಾರ್ಥಿಗಳು ಹಾಗೂ ಪೋಷಕರು ತಾವು ಪ್ರಸ್ತುತ ತಂಗಿರುವ ಸ್ಥಳಕ್ಕೆ ಹತ್ತಿರವಿರುವ ಪರೀಕ್ಷಾ ಕೇಂದ್ರದ ಮೂಲಕ ಪರೀಕ್ಷೆಯನ್ನು ಬರೆಯಲು ಅವಕಾಶ ಕಲ್ಪಿಸಲಾಗಿದ್ದು,ಈ ಕುರಿತಂತೆ ಬೇರೆ ಕೇಂದ್ರಗಳಲ್ಲಿ ಪರೀಕ್ಷೆ ಬರೆಯಲಿಚ್ಛಿಸುವ ಅಂತಹ ವಿದ್ಯಾರ್ಥಿಗಳು ತಮ್ಮ ಶಾಲೆಯ ಮುಖ್ಯ ಶಿಕ್ಷಕರನ್ನು ಈ ತಿಂಗಳ 25 ರೊಳಗೆ ಸಂಪರ್ಕಿಸಿ ವಿವರಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ. ಇದೇ ರೀತಿ ಯಾವುದಾದರೂ ವಲಸೆ ಕಾರ್ಮಿಕರ ಕುಟುಂಬಗಳ ಮಕ್ಕಳು ತಮ್ಮ ಸ್ವಂತ ಊರುಗಳಿಗೆ ತೆರಳಿದ್ದಲ್ಲಿ ಅಂತಹ ಮಕ್ಕಳಿಗೂ ಸಹ ಪರೀಕ್ಷಾ ಕೇಂದ್ರದ ಬದಲಾವಣೆಗೆ ಅವಕಾಶ ನೀಡಲಾಗಿದೆಎಂದು ಸುರೇಶ್‌ಕುಮಾರ್ ವಿವರಿಸಿದರು.

ರಾಜ್ಯದಗಡಿ ಜಿಲ್ಲೆಗಳಲ್ಲಿ ಬೇರೆ ರಾಜ್ಯಗಳಿಂದ ಬಂದು ಪರೀಕ್ಷೆಯನ್ನು ತೆಗೆದುಕೊಳ್ಳುವ ವಿದ್ಯಾರ್ಥಿಗಳಿಗೆ ಸೂಕ್ತ ವ್ಯವಸ್ಥೆ ಮಾಡಲಾಗುವುದು. ಹಾಗೆಯೇ ಚಂದನ ದೂರದರ್ಶನ ವಾಹಿನಿಯಲ್ಲಿ ಈಗಾಗಲೇ ಪ್ರಸಾರವಾಗುತ್ತಿರುವ ಪುನರ್‌ಮನನ ತರಗತಿಗಳಿಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದ್ದು, ಈ ಕಾರ್ಯಕ್ರಮದ ಅಂತ್ಯದಲ್ಲಿ ಮಾದರಿ ಪ್ರಶ್ನೆ ಪತ್ರಿಕೆಗಳ ಬಗ್ಗೆ ವಿಶೇಷ ತರಗತಿಗಳನ್ನು 3 ದಿನದ ಅವಧಿಗೆ ರೂಪಿಸಿ ವಿದ್ಯಾರ್ಥಿಗಳನ್ನು ಪರೀಕ್ಷೆ ಬರೆಯುವ ಮನಸ್ಥಿತಿಗೆ ಸಜ್ಜುಗೊಳಿಸಲಾಗುವುದು ಎಂದೂ ಸಚಿವರು ತಿಳಿಸಿದರು.

ಕೊರೋನಾ ಹಿನ್ನೆಲೆಯಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷೆ ನಡೆಸುವ ಸಂಬಂಧದಲ್ಲಿ ಹತ್ತಾರುಬಾರಿ ಅಧಿಕಾರಿಗಳ ಸಭೆ ಈ ಕುರಿತು ಕೈಗೊಳ್ಳಬಹುದಾದ ಸಾಧ್ಯತೆಗಳ ಕುರಿತು ಚರ್ಚಿಸಲಾಗಿದೆ. ಹಾಗೆಯೇ ರಾಜ್ಯದ ಸಾವಿರಾರು ವಿದ್ಯಾರ್ಥಿಗಳೊಂದಿಗೆ ಖುದ್ದಾಗಿ ಹಾಗೂ ಫೋನ್ ಮೂಲಕ ಚರ್ಚಿಸಲಾಗಿದೆ. ಶಿಕ್ಷಣ ತಜ್ಞರಾದ ಡಾ.ಗುರುರಾಜ ಕರ್ಜಗಿ, ಡಾ. ಎಂ.ಕೆ. ಶ್ರೀಧರ್, ಹಿಂದಿನ ಮುಖ್ಯ ಕಾರ್ಯದರ್ಶಿ ಎಸ್.ವಿ. ರಂಗನಾಥ್ ಹಿರಿಯ ಸಾಹಿತಿಗಳಾದ

ಬರಗೂರು ರಾಮಚಂದ್ರಪ್ಪ, ಎಸ್.ಜಿ. ಸಿದ್ಧರಾಮಯ್ಯ, ಹಿಂದಿನ ಶಿಕ್ಷಣ ಸಚಿವರುಗಳಾದ ಬಿ.ಕೆ.ಚಂದ್ರಶೇಖರ್, ಬಸವರಾಜ ಹೊರಟ್ಟಿ, ಮಾಜಿ ಸಭಾಪತಿ ಬಿ.ಎಲ್. ಶಂಕರ್, ಮಾಜಿ ಸಚಿವ 'ಪಿ.ಜಿ.ಆರ್. ಸಿಂಧ್ಯಾ, ಸುತ್ತೂರು, ಸಿದ್ಧಗಂಗಾ ಸೇರಿದಂತೆ ಶಿಕ್ಷಣ ದಾನ ಮಾಡುತ್ತಿರುವ ಹಲವಾರು ಸ್ವಾಮೀಜಿಗಳು ಸೇರಿದಂತೆ ಹಲವರೊಂದಿಗೆ ಚರ್ಚೆ ನಡೆಸಿ ಒಂದು ನಿರ್ಧಾರಕ್ಕೆ ಬರಲಾಯಿತು ಎಂದುಸಚಿವರು ತಿಳಿಸಿದರು.

ರಾಜ್ಯದ ಎಸ್ಸೆಸ್ಸೆಲ್ಸಿ ಮಕ್ಕಳ ಕೋರಿಕೆಯಂತೆ ಬಹಳ ಮೊದಲೇ ಪರೀಕ್ಷಾ ವೇಳಾಪಟ್ಟಿ ಪ್ರಕಟಿಸಲಾಗಿದ್ದು, ಅವರಿಗೆ ಈ ತನಕ ಅಭ್ಯಸಿಸಿದ್ದನ್ನು ಮತ್ತೊಮ್ಮೆ ಪುನರ್ಮನನ ಮಾಡಲು ಸಾಕಷ್ಟು ಸಮಯ ದೊರೆತಂತಾಗಿದೆ. ಒಂದೆರಡು ದಿನಗಳಲ್ಲಿ ಪರೀಕ್ಷೆಯ ಸವಿವರ ವೇಳಾಪಟ್ಟಿ ಪ್ರಕಟಿಸಲಾಗವುದು ಎಂದು ಸುರೇಶ್‌ಕುಮಾರ್ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಯ ಪ್ರಧಾನ 'ಕಾರ್ಯದರ್ಶಿಎಸ್.ಆರ್. ಉಮಾಶಂಕರ್, ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತ ಡಾ. ಕೆ.ಜಿ.ಜಗದೀಶ್, ಸರ್ವಶಿಕ್ಷಣ-ಕರ್ನಾಟಕ ರಾಜ್ಯ ಯೋಜನಾ ನಿರ್ದೇಶಕ ಡಾ. ಎಂ.ಟಿ. ರೇಜು, ಪದವಿಪೂರ್ವ ಶಿಕ್ಷಣ ಇಲಾಖೆ ನಿರ್ದೇಶಕಿ ಎಂ. ಕನಗವಲ್ಲಿ, ಕಪ್ರೌಶಿ ಪರೀಕ್ಷಾ ಮಂಡಳಿ ನಿರ್ದೇಶಕಿ ಸುಮಂಗಲಾ ಹಾಜರಿದ್ದರು.

# ಮಕ್ಕಳ ಸಹಾಯವಾಣಿ

ಬೆಂಗಳೂರು, ಮೇ 18 ( ಕರ್ನಾಟಕ ವಾರ್ತೆ )

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳು ರಕ್ಷಣಾ ಆಯೋಗವು ಕೋವಿಡ್ –19 ಅವಧಿಯಲ್ಲಿ ಮಕ್ಕಳ ಹಕ್ಕುಗಳ ಉಲ್ಲಂಘನೆಯ ಪ್ರಕರಣಗಳಿಗಾಗಿ ಸಾರ್ವಜನಿಕರ ಉಪಯೋಗಕ್ಕಾಗಿ ಸಹಾಯವಾಣಿಯನ್ನು ಚಾಲ್ತಿಗೆ ತರುತ್ತಿದ್ದು, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲ ಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಇವರು ವಿಕಾಸ ಸೌಧದಲ್ಲಿ ಸಹಾಯವಾಣಿ ಸಂಖ್ಯೆ 080–47181177 ಚಾಲನೆ ನೀಡಿದರು. ಸಾರ್ವಜನಿಕರು ಮಕ್ಕಳ ಮೇಲಿನ ಅತ್ಯಾಚಾರದ ಪ್ರಕರಣ, ಬಾಲ್ಯ ವಿವಾಹ, ಬಾಲ ಕಾರ್ಮಿಕ ಮಕ್ಕಳ ಮೇಲೆ ನಡೆಯುವ ದೌರ್ಜನ್ಯ ಹಾಗೂ ಲೈಂಗಿಕ ಕಿರುಕುಳ, ಶೋಷಣೆ, ಕಾಣೆಯಾದ ಮಕ್ಕಳ ಪ್ರಕರಣಗಳು ಮತ್ತು ಶಾಲಾ ಮಕ್ಕಳು/ಶಾಲೆಗೆ ಸಂಬಂಧಪಟ್ಟಂತೆ ಎಲ್ಲಾ ಪ್ರಕರಣಗಳಿಗೆ ಕುರಿತಾದ ದೂರುಗಳನ್ನು ಸಹಾಯವಾಣಿಗೆ ಕಳುಹಿಸಿ ಪಡೆಯಬಹುದಾಗಿರುತ್ತದೆ ಎಂದು ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Helpline for children

Bengaluru, May 18(Karnataka Information)

Karnataka State Commission for Protection of Child Rights (KSCPCR) has launched a helpline for public with regard to matters related to violation of child Rights. Additional Chief Secretary to Govt.of Karnataka, Department of Women and Child Development and Empowerment of Differently Abled and senior citizens, inaugurated the Helpline No. 080-47181177 related to atrocities on children such as child marriages, harassment and sexual exploitation on child labours, missing children, problems of children face at school etc., says official press release.

**Photon Attached )**

**ನಾಳೆಯಿಂದ, ಬಸ್ ಆರಂಭ - ಮಾಸ್ಕ್ ಸ್ಯಾನಿಟೈಸರ್ ಕಡ್ಡಾಯ -**

- ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ

ರಾಜ್ಯದ ಲಾಕ್‌ಡೌನ್ ಜಾರಿಯಿಂದಾಗಿ ಕಳೆದ ಎರಡು ತಿಂಗಳಿನಿಂದ ಸ್ಥಗಿತಗೊಂಡಿದ್ದ ಸರ್ಕಾರಿ ಹಾಗೂ ಖಾಸಗಿ ಬಸ್ ಸೇರಿದಂತೆ ವೋಲೋ, ಊಬರ್, ಆಟೋ ರಿಕ್ಷಾ ಸಂಚಾರ ನಾಳೆಯಿಂದ ಕಾರ್ಯಾರಂಭ ಮಾಡಲಿವೆ.

ನಾಳೆ ಬೆಳಗ್ಗೆ 7ರಿಂದ ಸಂಜೆ 7 ಗಂಟೆವರೆಗೆ ಬಿಎಂಟಿಸಿ, ಕೆ.ಎಸ್.ಆರ್.ಟಿ,ಎನ್‌ಡಬ್ಲು ಕೆಎಸ್‌ಆರ್, ಎನ್‌ಇ ಕೆಆರ್ ಸಿ, ಟ್ಯಾಕ್ಸಿ, ವೋಲಾ, ಊಬರ್ ವಾಹನಗಳು ಕೂಡ ಕಾರ್ಯಾಚರಣೆ ಪ್ರಾರಂಭಿಸಲು ರಾಜ್ಯ ಸರ್ಕಾರ ಅವಕಾಶ ನೀಡಿದೆ.

ಆದರೆ ಕಡ್ಡಾಯವಾಗಿ ಬಸ್ ಹಾಗೂ ಇತರೆ ವಾಹನಗಳಲ್ಲಿ ಕಡ್ಡಾಯವಾಗಿ ರಾಜ್ಯ ಸರ್ಕಾರದ ನಿಯಮಗಳನ್ನು ಪಾಲನೆ ಮಾಡಲೇಬೇಕು. ಪ್ರತಿಯೊಬ್ಬರು ಮಾಸ್ಕ್ ಧರಿಸುವುದು, ಸ್ಯಾನಿಟೈಸರ್ ಬಳಕೆ, ಸಾಮಾಜಿಕ ಅಂತರ ಕಾಯ್ದುಕೊಳ್ಳಬೇಕು. ಒಂದು ವೇಳೆ ಯಾರಾದರೂ ನಿಯಮಗಳನ್ನು ಉಲ್ಲಂಘಿಸಿದರೆ ಅಂಥವರ ಮೇಲೆ ದಂಡ ಬೀಳಲಿದೆ ಎಂದು ವಿಧಾನಸೌಧದಲ್ಲಿ ಮುಖ್ಯಮಂತ್ರಿ ಬಿ. ಎಸ್ ಯಡಿಯೂರಪ್ಪ ಅವರು ತಮ್ಮ ಸಂಪುಟ ಸಹೋದ್ಯೋಗಿಗಳು ಹಾಗೂ ಅಧಿಕಾರಿಗಳ ಜೊತೆ ಸಭೆ ನಡೆಸಿದ ಬಳಿಕ ಪತ್ರಿಕಾಗೋಷ್ಠಿ ನಡೆಸಿ,ಮಾತನಾಡಿದರು.

ರೆಡ್ ಜೋನ್ ಹಾಗೂ ಕಂಟೋನ್ಮೆಂಟ್ ಹೊರತುಪಡಿಸಿ ಉಳಿದ ಕಡೆ ವಾಹನಗಳ ಸಂಚಾರಕ್ಕೆ ಷರತ್ತುಬದ್ಧ ಅನುಮತಿಯನ್ನು ನೀಡಲಾಗಿದೆ. ರಾಜ್ಯದಲ್ಲಿ ಮೇ 31ರವರೆಗೆ ಲಾಕ್‌ಡೌನ್ ಮುಂದುವರೆಯಲಿದ್ದು, ಕೆಲವು ಚಟುವಟಿಕೆಗಳಿಗೆ ಷರತ್ತುಗಳನ್ನು ವಿಧಿಸಿ ಅನುಮತಿ ನೀಡಲಾಗಿದೆ ಎಂದು ಹೇಳಿದರು.

ಬಸ್‌ಗಳಲ್ಲಿ 30 ಪ್ರಯಾಣಿಕರು ಮಾತ್ರ ಸಂಚರಿಸಬೇಕು. ಎಲ್ಲರೂ ಕಡ್ಡಾಯವಾಗಿ ಮಾಸ್ಕ್ ಧರಿಸಬೇಕು, ಸ್ಯಾನಿಟೈಸರ್ ಬಳಕೆ, ಸಾಮಾಜಿಕ ಅಂತರ ಕಾಪಾಡಿಕೊಳ್ಳಬೇಕು ನಿಯಮ ಉಲ್ಲಂಘಿಸುವವರ ಮೇಲೆ ಅಧಿಕಾರಿಗಳು ದಂಡ ವಿಧಿಸಲಿದ್ದಾರೆ ಎಂದು ಎಚ್ಚರಿಕೆ ನೀಡಿದರು.

ಪ್ರಯಾಣಿಕರ ಹಿತದೃಷ್ಟಿಯಿಂದ ರೆಡ್ ಜೋನ್ ಮತ್ತು ಕಂಟೋನ್ಮೆಂಟ್ ಹೊರುತಪಡಿಸಿ ಉಳಿದ ಕಡೆ ಯಾರ ಅನುಮತಿಯನ್ನು ಪಡೆಯದೇ ವಾಹನಗಳ ಸಂಚಾರಕ್ಕೆ ಅವಕಾಶ ನೀಡಲಾಗಿದೆ. ನಾಳೆ ನಿರ್ಧಿಷ್ಟ ಪ್ರಮಾಣದ ಬಸ್‌ಗಳು ಸಂಚರಿಸಲಿವೆ. ಮುಂದಿನ ದಿನಗಳಲ್ಲಿ ಸಾರ್ವಜನಿಕರ ಪ್ರತಿಕ್ರಿಯೆ ನೋಡಿಕೊಂಡು ವಾಹನಗಳ ಸಂಚಾರವನ್ನು ಹೆಚ್ಚಳ ಮಾಡಲಾಗುವುದು ಎಂದರು.

ಹೊರ ರಾಜ್ಯದಿಂದ ಬಂದವರು ಕಡ್ಡಾಯವಾಗಿ ಕ್ವಾರಂಟೈನ್‌ಗೆ ಒಳಗಾಗಬೇಕೆಂದು ಸೂಚಿಸಿದರು. ಆಟೋ, ಟ್ಯಾಕ್ಸಿಗಳಲ್ಲಿ ಚಾಲಕ ಸೇರಿದಂತೆ ಇಬ್ಬರು ಪ್ರಯಾಣಿಕರು ಮಾತ್ರ ಚಲಿಸಬೇಕು. ಮ್ಯಾಕ್ಸಿಕ್ಯಾಬ್‌ಗಳಲ್ಲಿ ಚಾಲಕ ಸೇರಿದಂತೆ ಮೂವರಿಗೆ ಮಾತ್ರ ಅನುಮತಿ ನೀಡಲಾಗಿದೆ.

ಚಿನ್ನಬೆಳ್ಳಿ, ದಿನಸಿ ಅಂಗಡಿಗಳು ಸೇರಿದಂತೆ ಎಲ್ಲ ಅಂಗಡಿಗಳನ್ನು ತೆರೆಯಲು ಅವಕಾಶ ಕೊಡಲಾಗಿದೆ. ಆದರೆ ಮಾಲ್, ಸಿನಿಮಾ ಥಿಯೇಟರ್, ಹೋಟೆಲ್‌ಗಳು,  ಜಿಮ್ ಹಾಗೂ ಫಿಟ್ನೆಸ್ ಕೇಂದ್ರಗ ಯಥಾಸ್ಥಿತಿ ಮುಂದುವರೆಯಲಿದೆ.  ಸ್ಟೇಡಿಯಂಗಳಲ್ಲಿ ನಿಯಮಿತವಾಗಿ ಕ್ರೀಡಾಚಟುವಟಿಕೆಗಳು ಮುಂದುವರೆಸಬಹುದು. ಪಾರ್ಕ್‌ಗಳಲ್ಲಿ ಬೆಳಗ್ಗೆ 7 ಗಂಟೆಯಿಂದ 9ರವರೆಗೆ ಹಾಗೂ ಸಂಜೆ 5ರಿಂದ 7 ಗಂಟೆವರೆಗೆ ಸಾರ್ವಜನಿಕರು ವಾಯುವಿಹಾರವನ್ನು ನಡೆಸಬಹುದು. ಅಲ್ಲದೆ ಬೀದಿಬದಿ ವ್ಯಾಪಾರಿಗಳು ಕೂಡ ಎಂದಿನಂತೆ ತಮ್ಮ ಚಟುವಟಿಕೆಗಳನ್ನು ನಡೆಸಬಹುದಾಗಿದೆ ಎಂದು ತಿಳಿಸಿದರು.

ಪ್ರಯಾಣದರ ಹೆಚ್ಚಳ ಇಲ್ಲ -  ಕಳೆದ ಎರಡು ತಿಂಗಳಿನಿಂದ ಸಾರಿಗೆ ಸಂಚಾರ ಸ್ಥಗಿತಗೊಂಡ ಕಾರಣ ನಾಲ್ಕು ನಿಗಮಗಳು ನಷ್ಟದಲ್ಲಿದ್ದರೂ ಪ್ರಯಾಣಿಕರ ಹಿತದೃಷ್ಟಿಯಿಂದ ಬಸ್ ಪ್ರಯಾಣ ದರವನ್ನು ಹೆಚ್‌ಚಳ ಮಾಡದೆ ಪ್ರಸ್ತುತ ದರವೇ ಮುಂದುವರೆಯಲಿದೆ ಎಂದು ಸ್ಪಷ್ಟಪಡಿಸಿದರು. ಒಂದು ವೇಳೆ ನಿಗಮಗಳಿಗೆ ನಷ್ಟವಾಗಿದ್ದರೆ ಅದನ್ನು ಸರ್ಕಾರವೇ ಭರಿಸಲಿದೆ. ಸದ್ಯದ ಪರಿಸ್ಥಿತಿಯಲ್ಲಿ ಪ್ರಯಾಣಿಕರಿಗೆ ಹೊರೆಯಾಗದಂತೆ ಹಳೇ ಪ್ರಯಾಣ ದರವೇ ಮುಂದುವರೆಯಲಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಉಪಮುಖ್ಯಮಂತ್ರಿಗಳಾದ ಡಾ.ಅಶ್ವಥ್‌ನಾರಾಯಣ, ಲಕ್ಷ್ಮಣ್ ಸವದಿ, ಸಚಿವರಾದ ಬಸವರಾಜ್ ಬೊಮ್ಮಾಯಿ, ಆರ್.ಅಶೋಕ್, ವಿ.ಸೋಮಣ್ಣ, ಗೋಪಾಲಯ್ಯ, ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.